# Bangalore
# Regional News
# 31.12.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. 2025ಕ್ಕೆ ವಿದಾಯ ಹೇಳಿ 2026 ಸ್ವಾಗತಿಸಲು ಕ್ಷಣಗಣನೆ ; ರಾಜಧಾನಿ ಬೆಂಗಳೂರಿನಲ್ಲಿ ಬಿಗಿ ಭದ್ರತೆ
2. ರಾಜ್ಯದ ಇತರೆಡೆಗಳಲ್ಲೂ ಹೊಸವರ್ಷದ ಸ್ವಾಗತಕ್ಕೆ ಭರದ ತಯಾರಿ ; ಪ್ರವಾಸಿ ತಾಣಗಳಲ್ಲಿ ಕಟ್ಟೆಚ್ಚರ
3. ಕೋವಿಡ್ ಪ್ರಕರಣ ; ಸರ್ಕಾರಕ್ಕೆ ಅಂತಿಮ ವರದಿ ಸಲ್ಲಿಸಿದ ನ್ಯಾಯಾಧೀಶ ಮೈಕೆಲ್ ಡಿ. ಕುನ್ಹಾ
4. ಕೋಗಿಲು ಲೇಔಟ್ ತೆರವು ಪ್ರಕರಣ ; ನಿವಾಸಿಗಳ ಪೌರತ್ವದ ಬಗ್ಗೆ ಎನ್‌ಐಎ ತನಿಖೆಗೆ ಬಿಜೆಪಿ ಆಗ್ರಹ

***************

ಹೊಸ ವರ್ಷದ ಸ್ವಾಗತಕ್ಕೆ ಕ್ಷಣಗಣನೆ ಆರಂಭವಾಗಿದೆ. 2026 ಅನ್ನು ಅದ್ದೂರಿಯಾಗಿ ಬರಮಾಡಿಕೊಳ್ಳಲು ಜನರು ಕಾತರದಿಂದ ಕಾಯುತ್ತಿದ್ದಾರೆ. ರಾಜಧಾನಿ ಬೆಂಗಳೂರಿನಲ್ಲಿ ಜನದಟ್ಟಣೆ ನಿಯಂತ್ರಿಸಲು ಪೊಲೀಸ್ ಇಲಾಖೆ ಬಿಗಿ ಕ್ರಮಗಳನ್ನು ಕೈಗೊಂಡಿದೆ.

ಬೆಂಗಳೂರಿನ ಪ್ರಮುಖ ರಸ್ತೆಗಳಾದ ಎಂ.ಜಿ. ರಸ್ತೆ, ಚರ್ಚ್ ಸ್ಟ್ರೀಟ್ ಹಾಗೂ ಬ್ರಿಗೇಡ್ ರಸ್ತೆಗಳಲ್ಲಿ ಜನದಟ್ಟಣೆ ಉಂಟಾಗುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಮಹಾತ್ಮಾಗಾಂಧಿ ರಸ್ತೆಯ ಮೆಟ್ರೋ ನಿಲ್ದಾಣವನ್ನು ರಾತ್ರಿ 10ಗಂಟೆಯ ಬಳಿಕ ತಾತ್ಕಾಲಿಕವಾಗಿ ಬಂದ್ ಮಾಡಲಾಗಿದೆ. ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಲು ನಗರದಲ್ಲಿ 166 ಕಡೆಗಳಲ್ಲಿ ಮದ್ಯಸೇವಿಸಿ ವಾಹನ ಚಲಾಯಿಸುವವರ ತಪಾಸಣೆ, ಅಪಾಯಕಾರಿ ಸ್ಟಂಟ್ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು 92 ಸ್ಥಳಗಳನ್ನು ಗುರುತಿಸಿರುವುದಾಗಿ ಪೊಲೀಸರು ಮಾಹಿತಿ ನೀಡಿದ್ದಾರೆ. ಸಾರ್ವಜನಿಕರು ಹೊಸವರ್ಷವನ್ನು ಜವಾಬ್ದಾರಿಯುತವಾಗಿ ಆಚರಿಸುವಂತೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಮನವಿ ಮಾಡಿದ್ದಾರೆ.

ಹೊಸವರ್ಷದ ಸಂಭ್ರಮಾಚರಣೆಗೆ ಬೆಂಗಳೂರಿನಲ್ಲಿ ನಮ್ಮ ಮೆಟ್ರೋ ಕೂಡ ಹಲವು ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದೆ. ಪ್ರಮುಖ ಮಾರ್ಗಗಳಾದ ಹಸಿರು ಮಾರ್ಗದಲ್ಲಿ ಬೆಳಗಿನ ಜಾವ 2 ಗಂಟೆಯವರೆಗೆ ಹಳದಿ ಮಾರ್ಗದಲ್ಲಿ 3.10ರವರೆಗೆ ನೇರಳೆ ಮಾರ್ಗದಲ್ಲಿ ಬೆಳಗಿನ ಜಾವ 1.45ರವರೆಗೆ ಮೆಟ್ರೋ ಸೇವೆ ವಿಸ್ತರಿಸಿದೆ.

***************

ಹೊಸವರ್ಷಾಚರಣೆಯನ್ನು ಎಲ್ಲರೂ ಜವಾಬ್ದಾರಿಯುತವಾಗಿ ಆಚರಿಸಬೇಕೆಂದು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಹೊಸ ವರ್ಷ ಸಂಭ್ರಮದ ನೆಪದಲ್ಲಿ ಇನ್ನೊಬ್ಬರಿಗೆ ತೊಂದರೆ ಅಥವಾ ದುವರ್ತನೆ ತೋರಿದರೆ ಅಂತವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಯಾವುದೇ ಅಹಿತಕರ ಘಟನೆ ನಡೆಯದಂತೆ ನಗರದಾದ್ಯಂತ ವ್ಯಾಪಕ ಬಂದೋಬಸ್ತ್ ಮಾಡಲಾಗಿದೆ. ವರ್ಷಾಚರಣೆ ನಡೆಯುವ ಎಂಜಿ ರಸ್ತೆ,ಬ್ರಿಗೇಡ್ ರಸ್ತೆ, ಚರ್ಚ್‌ಸ್ಟ್ರೀಟ್‌ಗಳು ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಈಗಾಗಲೇ ಬಂದೋಬಸ್ತ್ ಪರಿಶೀಲನೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

***************

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಹೊಸ ವರ್ಷಾಚರಣೆಗೆ ಭರದ ಸಿದ್ಧತೆ ಮಾಡಿಕೊಳ್ಳಲಾಗುತ್ತಿದ್ದು, ಎಲ್ಲ ಜಿಲ್ಲೆಗಳಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ.

ಹೊಸ ವರ್ಷದ ಸಂಭ್ರಮಾಚರಣೆಯ ವೇಳೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮೈಸೂರು ನಗರ ಪೊಲೀಸ್ ಆಯುಕ್ತರು ಮಾರ್ಗಸೂಚಿ ಬಿಡುಗಡೆ ಮಾಡಿದ್ದಾರೆ. ನಗರ ವ್ಯಾಪ್ತಿಯಲ್ಲಿ ಒಟ್ಟು 1 ಸಾವಿರದ 466 ಪೊಲೀಸರ ನಿಯೋಜನೆ ಮಾಡಲಾಗಿದೆ.

ಇಂದು ರಾತ್ರಿ 7 ಗಂಟೆಯಿಂದ ಚಾಮುಂಡಿ ಬೆಟ್ಟಕ್ಕೆ ಸಾರ್ವಜನಿಕ ಪ್ರವೇಶ ನಿಷೇಧಿಸಲಾಗಿದೆ. ಈಗಾಗಲೇ ಬೆಟ್ಟಕ್ಕೆ ತೆರಳಿದವರು ರಾತ್ರಿ 9 ಗಂಟೆಯೊಳಗಾಗಿ ನಿರ್ಗಮಿಸಬೇಕೆಂದು ಎಂದು ಸೂಚಿಸಲಾಗಿದೆ.

ಹೆಚ್ಚು ಜನ ಸೇರುವ ಸ್ಥಳಗಳಲ್ಲಿ ಹೆಚ್ಚುವರಿ ಸಿಸಿಟಿವಿ ಕ್ಯಾಮರಾಗಳ ಅಳವಡಿಕೆಗೆ ಪೊಲೀಸ್ ಇಲಾಖೆ ಮುಂದಾಗಿದೆ. ಹೊಸ ವರ್ಷ ಆಚರಣೆ ನೆಪದಲ್ಲಿ ಅಶ್ಲೀಲ  ನೃತ್ಯ ಮಾದಕ ವಸ್ತುಗಳ ಸೇವನೆ, ಜೂಜಾಟ ನಿಷೇಧಿಸಲಾಗಿದೆ.

ಹೊಸ ವರ್ಷದ ಸ್ವಾಗತಕ್ಕೆ  ದಾವಣಗೆರೆ ಸಜ್ಜುಗೊಂಡಿದ್ದು, ಪೊಲೀಸ್ ಭದ್ರತೆಯ ಜೊತೆಗೆ ಚೆಕ್‌ಪೋಸ್ಟ್ ಗಳಲ್ಲಿ ಹೆಚ್ಚಿನ ನಿಗಾ ವಹಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ.

ಧ್ವನಿ : ಉಮಾ ಪ್ರಸಾಂತ್

ಹಾವೇರಿ ಜಿಲ್ಲೆಯಲ್ಲಿ ಹೊಸ ವರ್ಷ ಆಚರಣೆ ವೇಳೆ ಸಾರ್ವಜನಿಕರ ಸುರಕ್ಷತೆ ಮತ್ತು ಕಾನೂನು ಸುವ್ಯವಸ್ಥೆಯ ಹಿತದೃಷ್ಟಿಯಿಂದ ಜಿಲ್ಲಾದ್ಯಂತ 36 ಚೆಕ್ ಪೋಸ್ಟ್ ರಚಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ ಮಾಹಿತಿ ನೀಡಿದ್ದಾರೆ.

ಹೊಸ ವರ್ಷ ಆಚರಣೆಗೆ ಉತ್ತರ ಕನ್ನಡ ಜಿಲ್ಲೆಯ ಪ್ರಮುಖ ಕಡಲತೀರಗಳಿಗೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದಾರೆ. ಪ್ರವಾಸಿಗರ ಸುರಕ್ಷತಾ ದೃಷ್ಠಿಯಿಂದ ಜಿಲ್ಲೆಯ ಪ್ರಮುಖ ಕಡಲತೀರಗಳಾದ ಕಾರವಾರ ರವೀಂದ್ರನಾಥ ಟ್ಯಾಗೋರ್ ಕಡಲತೀರ, ಗೋಕರ್ಣ ಕಡಲತೀರ, ಓಂ ಕಡಲತೀರ, ಮುರುಡೇಶ್ವರ ಕಡಲತೀರಗಳಲ್ಲಿ ಎಲ್ಲಾ ರೀತಿಯ ಸುರಕ್ಷತಾ ಸಾಮಾಗ್ರಿಗಳೊಂದಿಗೆ ಲೈಫಗಾರ್ಡ್ ಸಿಬ್ಬಂದಿ ನಿಯೋಜಿಸಲಾಗಿದೆ.

***************

ಕೋವಿಡ್ ಅವಧಿಯಲ್ಲಿ ಸಂಭವಿಸಿದ ಸಾವುಗಳು ಮತ್ತು ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿನ ಅವ್ಯವಹಾರದ ಬಗ್ಗೆ ತನಿಖೆ ನಡೆಸಿರುವ ನ್ಯಾಯಾಧೀಶ ಮೈಕೆಲ್.ಡಿ ಕುನ್ನಾ ಅವರು, ಇಂದು ಸರ್ಕಾರಕ್ಕೆ ಅಂತಿಮವಾಗಿ ಸಲ್ಲಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ವರದಿ ಸ್ವೀಕರಿಸಿದ್ದಾರೆ.

***************

ಯಲಹಂಕದ ಕೋಗಿಲು ಲೇಔಟ್ ಬಳಿ 200ಕ್ಕೂ ಅಧಿಕ ಮನೆಗಳನ್ನು ನೆಲಸಮ ಮಾಡಿದ ಬಡಾವಣೆಗೆ ಇಂದು ಬಿಜೆಪಿ ನಿಯೋಗ ತೆರಳಿ, ಪರಿಶೀಲನೆ ನಡೆಸಿದೆ.

ಪ್ರತಿಪಕ್ಷ ನಾಯಕ ಆರ್. ಅಶೋಕ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸ್ಥಳಕ್ಕೆ ಭೇಟಿ ನೀಡಿ, ಮಾಹಿತಿ ಪಡೆದುಕೊಂಡಿದ್ದಾರೆ.

ಬಳಿಕ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಕೋಗಿಲು ಲೇಔಟ್‌ನಲ್ಲಿ ಅಕ್ರಮ ಶೆಡ್ ನಿರ್ಮಿಸಿಕೊಂಡಿದ್ದ ನಿವಾಸಿಗಳ ಪೌರತ್ವದ ಬಗ್ಗೆ ಎನ್‌ಐಎ ತನಿಖೆ ಆಗಬೇಕು ಎಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಎನ್‌ಐಎ ತನಿಖೆ ಬಳಿಕವೇ ಮನೆ ನೀಡಬೇಕು ಎಂದು ತಿಳಿಸಿದ್ದಾರೆ.

***************

2025 ರಲ್ಲಿ ನಡೆದ ಪ್ರಮುಖ ಘಟನಾವಳಿಗಳ ಕುರಿತ ವಿಶೇ..ಷ ಕಾರ್ಯಕ್ರಮ 'ಕಾಲಚಕ್ರ' ಇಂದು ಆಕಾಶವಾಣಿಯಲ್ಲಿ ಪ್ರಸಾರವಾಗಲಿದೆ. ಬೆಂಗಳೂರು ಆಕಾಶವಾಣಿಯ ಪ್ರಾದೇಶಿಕ ಸುದ್ದಿ ವಿಭಾಗ ಸಿದ್ಧಪಡಿಸಿರುವ 45 ನಿಮಿಷಗಳ ಈ ಕಾರ್ಯಕ್ರಮ ಇಂದು ರಾತ್ರಿ 9 ಗಂಟೆ 15 ನಿಮಿಷದಿಂದ 10 ಗಂಟೆಯವರೆಗೆ ಪ್ರಸಾರವಾಗಲಿದೆ.

ಈ ಕಾರ್ಯಕ್ರಮ ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳಿಂದ ಏಕಕಾಲದಲ್ಲಿ ಮೂಡಿಬರಲಿವೆ.

***************

ಇತ್ತೀಚಿನ ದಿನಗಳಲ್ಲಿ ಆರೋಗ್ಯದ ದೃಷ್ಟಿಯಿಂದ ಜನರು ಹೆಚ್ಚಾಗಿ ಸಿರಿಧಾನ್ಯಗಳ ಮೊರೆ ಹೋಗುತ್ತಿದ್ದಾರೆ. ಸರ್ಕಾರವು ಈಗ ಸಿರಿಧಾನ್ಯಗಳಿಗೆ ಪ್ರೋತ್ಸಾಹ ನೀಡುತ್ತಿದೆ. ದೈನಂದಿನ ಆಹಾರದಲ್ಲಿ ಪ್ರತಿಯೊಬ್ಬರೂ ಸಿರಿಧಾನ್ಯಗಳ ಬಳಕೆಯನ್ನು ಹೆಚ್ಚಿಸಿ ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ತಿಳಿಸಿದ್ದಾರೆ.

ಸಾರ್ವಜನಿಕರು ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳನ್ನು ನಿತ್ಯದ ಆಹಾರದಲ್ಲಿ ಅಳವಡಿಸಿಕೊಳ್ಳಲು ಸಿರಿಧಾನ್ಯ ಸ್ಪರ್ಧೆ ಸಹಕಾರಿ ಆಗಲಿದೆ ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಹೇಳಿದ್ದಾರೆ.

ಸಿರಿಧಾನ್ಯಗಳು ಪೋಷಕಾಂಶಗಳ ಸಂಪತ್ತಾಗಿದ್ದು, ಮಧುಮೇಹದಂತಹ ರೋಗಗಳಿಗೆ ಮದ್ದಿನಂತೆ ಕೆಲಸ ಮಾಡುತ್ತವೆ ಎಂದು ತುಮಕೂರು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಲಕ್ಷ್ಮಣ್ ಕಲ್ಲಣ್ಣನವರ್ ಅಭಿಪ್ರಾಯಪಟ್ಟಿದ್ದಾರೆ. ಸಿರಿಧಾನ್ಯಗಳಲ್ಲಿರುವ ವಿಶಿಷ್ಟ ಪೋಷಕಾಂಶಗಳು ಉತ್ತಮ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಸಹಕಾರಿಯಾಗುತ್ತವೆ. ನಾರಿನಾಂಶ ಹೆಚ್ಚು ಇರುವುದರಿಂದ ದೇಹದಲ್ಲಿನ ಕೊಬ್ಬಿನಾಂಶ ತಗ್ಗಿಸಿ ಹೃದಯ ರೋಗ, ಸ್ಥೂಲಕಾಯ ಮತ್ತಿತರ ಜೀವನಶೈಲಿ ಸಂಬಂಧಿತ ರೋಗಗಳನ್ನು ತಡೆಗಟ್ಟಲು ನೆರವಾಗುತ್ತದೆ ಎಂದು ತಿಳಿಸಿದ್ದಾರೆ.

***************

ಕರ್ನಾಟಕ ಸಾಹಿತ್ಯ ಅಕಾಡೆಮಿಯ ಕನ್ನಡ ಅಧ್ಯಯನ ಕೇಂದ್ರ ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ಸಹಯೋಗದಲ್ಲಿ ಜನವರಿ 2 ರಿಂದ 4ರವರೆಗೆ ಮೂರು ದಿನಗಳ ಕಾಲ ದಲಿತ ಸಾಹಿತ್ಯ ಮತ್ತು ಚಳವಳಿ 50 ಎಂಬ ಅಧ್ಯಯನ ಶಿಬಿರ ಆಯೋಜಿಸಲಾಗಿದೆ.

ಈ ಶಿಬಿರದ ನಿರ್ದೇಶಕರಾಗಿ ಕೋಟಿಗಾನಹಳ್ಳಿ ರಾಮಯ್ಯ ಅವರು, ಶಿಬಿರದ ಸಹ ನಿರ್ದೇಶಕರಾಗಿ ದು. ಸರಸ್ವತಿ ಹಾಗೂ ಸುಬ್ಬು ಹೊಲೆಯಾರ್, ಹಾಗೂ ಶಿಬಿರದ ಸಂಚಾಲಕರಾಗಿ ಅಕಾಡೆಮಿಯ ಸದಸ್ಯ ಡಾ. ರವಿಕುಮಾರ್ ಬಾಗಿ ನಿರ್ವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕುಲಪತಿ ಡಾ. ಜಯಕರ ಎಸ್.ಎಂ, ಮಾನ್ಯ ವಹಿಸಲಿದ್ದಾರೆ.

***************

ರಾಷ್ಟ್ರಕವಿ ಕುವೆಂಪುರವರ 121ನೇ ಜನ್ಮದಿನದ ಅಂಗವಾಗಿ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದ ಸಂಯುಕ್ತ ಆಶ್ರಯದಲ್ಲಿ "ಮಲೆಗಳಲ್ಲಿ ಮದುಮಗಳು ಕಾದಂಬರಿಯ ಪಾತ್ರಾವಲೋಕನ"ದ ಕುರಿತು ಇಂದು ವಿಶೇಷ ಉಪನ್ಯಾಸ ಏರ್ಪಡಿಸಲಾಗಿತ್ತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದ ಗಾಯಿತ್ರಿ ಕೆ.ಎಂ. ಮಾತನಾಡಿ ಕುವೆಂಪು ಸಾಹಿತ್ಯದಲ್ಲಿನ ವೈಚಾರಿಕತೆಯನ್ನು ರೂಢಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ವಿಶೇಷ ಉಪನ್ಯಾಸ ನೀಡಿದ ಖ್ಯಾತ ಸಾಹಿತಿ ಡಾ. ಕೆ.ವೈ. ನಾರಾಯಣಸ್ವಾಮಿ, ಪಾರಾಂಪರಿಕ ಮೌಲ್ಯಗಳನ್ನು ಅನಾವರಣಗೊಳಿಸುವ ಈ ಕಾದಂಬರಿಯಲ್ಲಿ ಬರುವ ಪಾತ್ರಗಳೆಲ್ಲವೂ ಜೀವ ಸಂಘರ್ಷದ ಕತೆಗಳನ್ನು ಸಾರುತ್ತವೆ ಎಂದು ವಿಶ್ಲೇಷಿಸಿದರು.

*******ಮುಕ್ತಾಯ*******